ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2031 (2398)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಸರಕಾರಿ ಪ್ರೌಢ ಶಾಲೆಗಳಲ್ಲಿ ಬೋಧಕೇತರ ಹುದ್ದೆ ಹಾಗೂ ಅತಿಥಿ ಶಿಕ್ಷಕರ ಕುರಿತು

(ಅ) ರಾಜ್ಯದಲ್ಲಿರುವ ಒಟ್ಟು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಪ್ರೌಢ ಶಾಲೆಗಳಲ್ಲಿ ಮಂಜೂರಾದ ಬೋಧಕೇತರ ಹುದ್ದೆಗಳೆಷ್ಟು;

(ಇ) ಮಂಜೂರಾದ ಹುದ್ದೆಗಳಲ್ಲಿ ಪ್ರಸ್ತುತ ಎಷ್ಟು ಬೋಧಕೇತರ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ; ಎಷ್ಟು ನೌಕರರು ಏಜೆನ್ಸಿ ಮೂಲಕ/ಶಾಲಾ ಸುಧಾರಣಾ ಸಮಿತಿ ಮೂಲಕ ಕಾರ್ಯನಿರ್ವಹಿಸುತ್ತಿದ್ದಾರೆ ಮತ್ತು ಅವರಿಗೆ ನೀಡುತ್ತಿರುವ ವೇತನ ಎಷ್ಟು;

(ಈ) ಮುಂಬರುವ ಶೈಕ್ಷಣಿಕ ವರ್ಷಗಳಲ್ಲಿ ಬೋಧಕೇತರ ನೌಕರರನ್ನು ನೇಮಕ ಮಾಡಿಕೊಳ್ಳಲು ಸರಕಾರ ಚಿಂತನೆ ನಡೆಸಿದೆಯೇ;

(ಉ) ಪ್ರೌಢ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು; ಪ್ರತಿ ತಿಂಗಳು ಅವರಿಗೆ ಎಷ್ಟು ವೇತನ ನೀಡಲಾಗುತ್ತಿದೆ; ಮತ್ತು ಇದನ್ನು ಯಾವ ವರ್ಷದಿಂದ ನಿಗಧಿಪಡಿಸಲಾಗಿದೆ?